(225)

## ಕರ್ನಾಟಕ ಸರ್ಕಾರದ ನಡವಳಿಗಳು

ನಂ. 1854
ದಿನಾಂಕ 21/7/16
ಬೆಂಗಳೂರು

ವಿಷಯ: ಮೆ: Arsta Eco Pvt. Ltd., ರವರಿಗೆ 1.2 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ ಉತ್ಪಾದನಾ ಘಟಕವನ್ನು ತುಮಕೂರು ಜಿಲ್ಲೆ ಮತ್ತು ತಾಲ್ಲೂಕಿನ ಬೆನ್ನಾಯಕನಹಳ್ಳಿ ಗ್ರಾಮದಲ್ಲಿ ಸ್ಥಾಪಿಸಲು ನಿರಾಕ್ಷೇಪಣಾ ಪತ್ರವನ್ನು ನೀಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: A 222

* * *

**ಪ್ರಸ್ತಾವನೆ :-**

ಮೆ: Arsta Eco Pvt. Ltd., ರವರಿಗೆ 1.2 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ ಉತ್ಪಾದನಾ ಘಟಕವನ್ನು 0.2 ಮೆ.ವ್ಯಾ. ವಿದ್ಯುತ್ತನ್ನು ಸ್ವಂತಕ್ಕೆ ಉಪಯೋಗಿಸಿಕೊಂಡು ಬಾಕಿ ಉಳಿಯುವ 1 ಮೆ.ವ್ಯಾ. ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ತುಮಕೂರು ಜಿಲ್ಲೆ ಮತ್ತು ತಾಲ್ಲೂಕಿನ ಬೆನ್ನಾಯಕನಹಳ್ಳಿ ಗ್ರಾಮದಲ್ಲಿ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಏಕ ಕಡತ ಪದ್ಧತಿಯಡಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿಸ್ತೀರ್ಣ | : | ಎರಡು ಎಕರೆಗಳು |
| ಯೋಜನಾ ವೆಚ್ಚದ ಒಟ್ಟು ಮೊತ್ತ | : | ರೂ.3.50 ಕೋಟಿಗಳು |
| ಕಂಪನಿಯ ನೆಟ್‌ವರ್ತ್ | : | ರೂ.715,865/- |
| ಕಂಪನಿಯ CIN ಸಂಖ್ಯೆ | : | U01407KA2014PTCO73361 |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಹೌದು |
| ಸಮೀಪದ ಸಬ್-ಸ್ಟೇಷನ್ ವಿವರ | : | ತಿಪಟೂರು |

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 171 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 12.7.2016.**

ಮೆ: Arsta Eco Pvt. Ltd., ರವರಿಗೆ ತುಮಕೂರು ಜಿಲ್ಲೆ ಮತ್ತು ತಾಲ್ಲೂಕಿನ ಬೆನ್ನಾಯಕನಹಳ್ಳಿ ಗ್ರಾಮದಲ್ಲಿ 1.2 ಮೆ.ವ್ಯಾ. ಸಾಮರ್ಥ್ಯದ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

MD KREDL

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ವಿದ್ಯುತ್ ರವಾನೆ ವ್ಯವಸ್ಥೆ ಸಂಬಂಧ (Evacuation of Power) ಪ್ರತ್ಯೇಕವಾಗಿ ಅನುಮೋದನೆ ಪಡೆಯತಕ್ಕದ್ದು;
3. ಪ್ರಸ್ತಾಪಿತ ಜೈವಿಕ ಇಂಧನ ಘಟಕದಲ್ಲಿ ಉತ್ಪತ್ತಿಯಾಗುವ ಒಟ್ಟು ವಿದ್ಯುತ್ತಿನ ಪ್ರಮಾಣದ ಪೈಕಿ 1 ಮೆ.ವ್ಯಾ. ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂಗೆ ಮಾರಾಟ ಮಾಡುವ ಕುರಿತು ವಿದ್ಯುತ್ ಖರೀದಿ ಒಪ್ಪಂದವನ್ನು (ಪಿಪಿಎ) ಮಾಡಿಕೊಳ್ಳತಕ್ಕದ್ದು ಹಾಗೂ ಉಳಿದ ವಿದ್ಯುತ್ತನ್ನು ಸ್ವಂತಕ್ಕೆ ಬಳಸಿಕೊಳ್ಳಲು ಅನುಮತಿಸಲಾಗಿದೆ.

GM (Tech) I/C
KREDL

4. ಅಭಿವೃದ್ಧಿದಾರರು ಉದ್ದೇಶಿತ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಸ್ವತಃ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು. ಸರ್ಕಾರದಿಂದ ಈ ಸಂಬಂಧ ಯಾವುದೇ ರೀತಿಯಲ್ಲಿ ಜಮೀನನ್ನು ಮಂಜೂರಾತಿ ಮಾಡಲಾಗುವುದಿಲ್ಲ;
5. ಮೆ: Arsta Eco Pvt. Ltd., ಕಂಪನಿಯವರು ಯೋಜನಾ ಅನುಷ್ಠಾನಕ್ಕೆ ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
6. ಮೆ: Arsta Eco Pvt. Ltd., ಕಂಪನಿಯವರು ಪ್ರಸ್ತಾಪಿತ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
7. ಅಭಿವೃದ್ಧಿದಾರರು ಈ ಸ್ಥಾವರವನ್ನು ಸ್ಥಾಪಿಸುವ ಮುನ್ನ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ತಯಾರಿಸಿ ಕ್ರೆಡಲ್ ಸಂಸ್ಥೆಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
8. ಮೆ: Arsta Eco Pvt. Ltd., ಕಂಪನಿಯವರು ಸ್ಥಾಪಿಸುತ್ತಿರುವ ಈ ಜೈವಿಕ ಇಂಧನ ಘಟಕಕ್ಕೆ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್),**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☏ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ತುಮಕೂರು ಜಿಲ್ಲೆ, ತುಮಕೂರು.
8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9 ಮೆ: Arsta Eco Pvt. Ldt., Sri Jenugiri, 102/3, Bennayakanahalli, K.G.Palya Post, Tiptur-572202, Tumkur District.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.